# ಕಾರ್ಕಳದಿಂದ ರಾಷ್ಟ್ರಕ್ಕೆ ಆಟಗಾರರನ್ನು ನೀಡಿದ ಹೆಮ್ಮೆ

» **ಮಹಿಳಾ ಕಬಡ್ಡಿ ಚಾಂಪಿಯನ್‌ಶಿಪ್ ಉದ್ಘಾಟಿಸಿ ಶಾಸಕ ಸುನೀಲ್ ಕುಮಾರ್ ಹೇಳಿಕೆ**

**ಕಾರ್ಕಳ:** ಕಬಡ್ಡಿ ಆಟಗಾರರನ್ನು ರಾಜ್ಯಕ್ಕೆ ರಾಷ್ಟ್ರಕ್ಕೆ ನೀಡಿದ ಕೀರ್ತಿ ಕಾರ್ಕಳಕ್ಕಿದೆ. ಏಷ್ಯನ್ ಗೇಮ್ಸ್‌ನಲ್ಲಿ ಭಾರತವನ್ನು ಪ್ರತಿನಿಧಿಸಿದ್ದ ಮಹಿಳಾ ಕಬಡ್ಡಿ ತಂಡದ ಕ್ಯಾಪ್ಟನ್ ಮಮತಾ ಪೂಜಾರಿ, ಕಬಡ್ಡಿ ಪಟು ಸುಕೇಶ್ ಹೆಗ್ಡೆ ಕಾರ್ಕಳದವರು ಎನ್ನುವುದು ಹೆಮ್ಮೆ ಎಂದು ಶಾಸಕ ಸುನೀಲ್ ಕುಮಾರ್ ಹೇಳಿದರು.

ಮಂಜುನಾಥ ಪೈ ಸ್ಮಾರಕ ಸರ್ಕಾರಿ ಪ್ರಥಮದರ್ಜೆ ಕಾಲೇಜು ಹಾಗೂ ಮಂಗಳೂರು ವಿಶ್ವವಿದ್ಯಾಲಯ ಜಂಟಿಯಾಗಿ ಆಯೋಜಿಸಿದ್ದ ವಿವಿ ಮಟ್ಟದ ಅಂತರ್ ಕಾಲೇಜು ಮಹಿಳಾ ಕಬಡ್ಡಿ ಚಾಂಪಿಯನ್‌ಶಿಪ್ ಪೆರ್ವಾಜೆಯ

**ಕ್ರೀಡಾಳುಗಳು ವಿಶ್ವವಿದ್ಯಾಲಯ ಮಟ್ಟಕ್ಕೆ ಸೀಮಿತವಾಗದೆ, ಕೇಂದ್ರ ಹಾಗೂ ರಾಜ್ಯ ಸರ್ಕಾರ ನೀಡುವ ಸವಲತ್ತುಗಳನ್ನು ಬಳಸಿಕೊಂಡು ಅಂತಾರಾಷ್ಟ್ರೀಯ ಮಟ್ಟದಲ್ಲಿ ಮಿಂಚುವ ಛಲ ತೊಡಬೇಕು.**

**| ರೋಹಿತ್ ಕುಮಾರ್ ಕಟೀಲು**
**ಅಂತಾರಾಷ್ಟ್ರೀಯ ಕ್ರೀಡಾಪಟು**

ನಾರಾಯಣಗುರು ಸಭಾಭವನದಲ್ಲಿ ಸೋಮವಾರ ಉದ್ಘಾಟಿಸಿ ಮಾತನಾಡಿದರು.

ಹಿಂದೆ ಗ್ರಾಮೀಣ ಭಾಗದಲ್ಲಿ ಕ್ರಿಕೆಟ್, ವಾಲಿಬಾಲ್ ಪಂದ್ಯಗಳಿಗಷ್ಟೇ ಪ್ರಾಮುಖ್ಯತೆ ಇತ್ತು. ಇತ್ತೀಚಿನ ವರ್ಷಗಳಲ್ಲಿ ಕಬಡ್ಡಿ ಪ್ರಸಿದ್ಧಿ ಪಡೆಯುತ್ತಿದೆ. ಕಾರ್ಕಳ ತಾಲೂಕಿನಲ್ಲಿ ಮೊದಲ ಬಾರಿ ವಿವಿ ಮಟ್ಟದ ಕ್ರೀಡೆ ನಡೆಯುತ್ತಿದ್ದು, ಕ್ರೀಡಾಸ್ಫೂರ್ತಿಯಿಂದ ಇದರಲ್ಲಿ ಭಾಗವಹಿಸಬೇಕು ಎಂದರು.

ಟೂರ್ನಿಗೆ ಅಂತಾರಾಷ್ಟ್ರೀಯ ಮಟ್ಟದ ಕ್ರೀಡಾಪಟು ರೋಹಿತ್ ಕುಮಾರ್ ಕಟೀಲು ಸಾಂಕೇತಿಕ ಚಾಲನೆ ನೀಡಿದರು. ಪ್ರಾಂಶುಪಾಲ ಶ್ರೀವರ್ಮ ಅಜ್ರಿ ಅಧ್ಯಕ್ಷತೆ ವಹಿಸಿದ್ದರು. ಎರಡು ದಿನಗಳ ಪಂದ್ಯಾವಳಿಯಲ್ಲಿ 30 ತಂಡಗಳು ಭಾಗವಹಿಸಿವೆ. ಉದ್ಯಮಿ ಡಿ.ಆರ್.ರಾಜು, ಮಂಗಳೂರು ವಿಶ್ವವಿದ್ಯಾಲಯ ದೈಹಿಕ ಶಿಕ್ಷಣ ವಿಭಾಗದ ಹರಿದಾಸ್ ಕೂಳೂರು ಹಾಗೂ ಕಾಲೇಜಿನ ಕ್ರೀಡಾ ಕಾರ್ಯದರ್ಶಿ ವಿಘ್ನೇಶ್, ಕೃಷ್ಣಮೂರ್ತಿ ವೈದ್ಯ ಉಪಸ್ಥಿತರಿದ್ದರು. ಸ್ನಾತಕೋತ್ತರ ವಿಭಾಗದ ಸಂಚಾಲಕ ವಿದ್ಯಾಧರ ಹೆಗ್ಡೆ ವಂದಿಸಿದರು. ವಾಣಿಜ್ಯ ವಿಭಾಗ ಮುಖ್ಯಸ್ಥೆ ಜ್ಯೋತಿ ಎಲ್.ಜನ್ನೆ ಕಾರ್ಯಕ್ರಮ ನಿರೂಪಿಸಿದರು.